ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ
ಜಿಲ್ಲಾಡಳಿತ ಭವನ, ಶಿಡ್ಲಘಟ್ಟ ರಸ್ತೆ
ದೂರವಾಣಿ : 08156-277016
ಇ-ಮೇಲ್ : zpadmckbpur@gmail.com
ಫ್ಯಾಕ್ಸ್ : 08156-277011

ಸಂಖ್ಯೆ: CKBZP-11013(33)/18/2024-ADMN-CHIKKABALLAPURA (ಇ-45421) ದಿನಾಂಕ:29.04.2024.

ರವರಿಗೆ:

ಕಾರ್ಯನಿರ್ವಾಹಕ ಅಧಿಕಾರಿ
ತಾಲ್ಲೂಕು ಪಂಚಾಯಿತಿ
ಬಾಗೇಪಲ್ಲಿ/ಚಿಂತಾಮಣಿ/ಚಿಕ್ಕಬಳ್ಳಾಪುರ
ಗೌರಿಬಿದನೂರು/ಗುಡಿಬಂಡೆ/ಶಿಡ್ಲಘಟ್ಟ.

ಮಾನ್ಯರೇ.

**ವಿಷಯ:** ಗ್ರಾಮ ಪಂಚಾಯಿತಿಗಳು ಸ್ವಂತ ಸಂಪನ್ಮೂಲ ನಿಧಿಯಿಂದ ಶೇ.25 ರ ಪ.ಜಾತಿ/ ಪ.ಪಂಗಡ ಕಲ್ಯಾಣ ಕಾರ್ಯಕ್ರಮಗಳಿಗೆ ಮೀಸಲಿರಿಸಿದ ಹಾಗೂ ವೆಚ್ಚ ಮಾಡಲಾದ ಅನುದಾನದ ವಿವರಗಳನ್ನು ಸಲ್ಲಿಸುವ ಕುರಿತು.

**ಉಲ್ಲೇಖ:** ನಿರ್ದೇಶಕರು (ಅಭಿವೃದ್ಧಿ), ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ರವರ ಪತ್ರದ ಸಂಖ್ಯೆ: ಕಪಂರಾಆ/ ಅಭಿವೃದ್ಧಿ/183/2024 ದಿನಾಂಕ: 19.03.2024.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020-21, 2021-22, 2022-23 ಮತ್ತು 2023-24ನೇ ಸಾಲುಗಳಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಸಂಪನ್ಮೂಲ ನಿಧಿಯಲ್ಲಿ ಶೇ.25 ರಷ್ಟು ಮೊತ್ತವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಕಾರ್ಯಕ್ರಮಕ್ಕೆ ಬಳಸಲು ಸ್ಪಷ್ಟ ನಿರ್ದೇಶನ ನೀಡಿದ್ದರೂ ಸಹ ಯಾವುದೇ ಗ್ರಾಮ ಪಂಚಾಯಿತಿಗಳು ಸ್ವಂತ ಸಂಪನ್ಮೂಲ ನಿಧಿಯಿಂದ ಶೇ.25ರ ಖಾತೆಗೆ ಜಮೆ ಮಾಡದೆ ದುರ್ಬಳಕೆ ಮಾಡಿಕೊಂಡಿರುವ ಬಗ್ಗೆ ಹಾಗೂ ಸಂಗ್ರಹವಾದ ಮೊತ್ತದಲ್ಲಿ ಶೇ.25ರ ಖಾತೆ ಜಮೆ ಮಾಡಿರುವ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವಂತೆ ಶ್ರೀ ಎಂ.ಚಲಪತಿ, ಅಖಿಲ ಭಾರತೀಯ ಪಂಚಾಯತ್ ಪರಿಷದ್, ಬೆಂಗಳೂರು ರವರ ದೂರು ಸಲ್ಲಿಸಿದ್ದು, ಕಳೆದ ನಾಲ್ಕು ವರ್ಷಗಳಲ್ಲಿ ಗ್ರಾಮ ಪಂಚಾಯಿತಿ ಸ್ವಂತ ಸಂಪನ್ಮೂಲ ನಿಧಿಯಿಂದ ಶೇ.25ರ ಪ.ಜಾತಿ/ ಪ.ಪಂಗಡ ಕಲ್ಯಾಣ ಕಾರ್ಯಕ್ರಮಗಳಿಗೆ ಮೀಸಲಿರಿಸಿದ ಹಾಗೂ ವೆಚ್ಚ ಮಾಡಿದ ಅನುದಾನವನ್ನು ಉಲ್ಲೇಖಿತ ಪತ್ರದಲ್ಲಿ ನೀಡಲಾದ ಅನುಬಂಧದಲ್ಲಿ ಸಿದ್ಧಪಡಿಸಿ ಒಂದು ವಾರದೊಳಗೆ ಆಯುಕ್ತಾಲಯಕ್ಕೆ ಸಲ್ಲಿಸುವಂತೆ ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ.

ಅದರಂತೆ 2020-21, 2021-22, 2022-23 ಮತ್ತು 2023-24ನೇ ಸಾಲುಗಳಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಸಂಪನ್ಮೂಲ ನಿಧಿಯಲ್ಲಿ ಶೇ.25 ರಷ್ಟು ಮೊತ್ತವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಕಾರ್ಯಕ್ರಮಕ್ಕೆ ಮೀಸಲಿರಿಸಿದ ಹಾಗೂ ವೆಚ್ಚ ಮಾಡಿದ ಅನುದಾನವನ್ನು ಉಲ್ಲೇಖಿತ ಪತ್ರದಲ್ಲಿ ನೀಡಲಾದ ಅನುಬಂಧದಲ್ಲಿ ಸಿದ್ಧಪಡಿಸಿ ತುರ್ತಾಗಿ ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

**(ಕಛೇರಿ ಟಿಪ್ಪಣಿ ಮು.ಕಾ.ನಿ.ಅ ರವರಿಂದ ಅನುಮೋದಿಸಲ್ಪಟ್ಟಿದೆ)**

ತಮ್ಮ ವಿಶ್ವಾಸಿ
29/4/24
ಉಪ ಕಾರ್ಯದರ್ಶಿ
ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಕರ್ನಾಟಕ ಪಂಚಾಯತ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆ.ಜಿ ರಸ್ತೆ, ಬೆಂಗಳೂರು ರವರ ಮಾಹಿತಿಗಾಗಿ.
2. ಜಿಲ್ಲೆಯ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಪ್ರತಿ.

E-45421

**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

ಸಂಖ್ಯೆ: ಕಪಂರಾಆ/ಅಭಿವೃದ್ಧಿ/183/2024 ದಿನಾಂಕ:19.04.2024.

**ಇವರಿಗೆ,**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
(ಬೀದರ, ಕೊಪ್ಪಳ, ದಕ್ಷಿಣ ಕನ್ನಡ ಜಿಲ್ಲೆಗಳನ್ನು ಹೊರತುಪಡಿಸಿ)

ಮಾನ್ಯರೇ,

**ವಿಷಯ:** ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಸಂಪನ್ಮೂಲ ಖಾತೆಯಿಂದ ಶೇ. 25 ರ (ಎಸ್.ಸಿ/ಎಸ್.ಟಿ ಖಾತೆಗೆ) ಹಣ ಜಮೆ ಮಾಡಲು ದುರ್ಬಳಕೆ ಮಾಡಿರುವ ಬಗ್ಗೆ.

**ಉಲ್ಲೇಖ:** ಆಯುಕ್ತಾಲಯದ ಇದೇ ಸಮ ಸಂಖ್ಯೆ ಪತ್ರ ದಿನಾಂಕ: 19.03.2024

****

ವಿಷಯಕ್ಕೆ ಸಂಬಂಧಿಸಿದಂತೆ, ಅನುಬಂದದಲ್ಲಿ 2020-21, 2021-22, 2022-23 ಮತ್ತು 2023-24 ನೇ ಸಾಲುಗಳಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳು ಸ್ವಂತ ಸಂಪನ್ಮೂಲ ನಿದಿಯಿಂದ ಶೇ.25 ರಷ್ಟು ಮೊತ್ತವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಲ್ಯಾಣ ಕಾರ್ಯಕ್ರಮಗಳಿಗೆ ಮೀಸಲಿರಿಸಿದ ಹಾಗೂ ವೆಚ್ಚ ಮಾಡಿದ ಅನುದಾನವನ್ನು ಭರ್ತಿ ಮಾಡಿ ಆಯುಕ್ತಾಲಯಕ್ಕೆ ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಕೋರಲಾಗಿತ್ತು. ಆದರೆ ಇದುವರೆವಿಗೂ ಬೀದರ, ಕೊಪ್ಪಳ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ ಜಿಲ್ಲಾ ಪಂಚಾಯಿತಿಗಳಿಂದ ವರದಿ ಸ್ವೀಕೃತವಾಗಿರುವುದಿಲ್ಲ.

ಆದುದರಿಂದ ಮತ್ತಷ್ಟು ವಿಳಂಬಕ್ಕೆ ಅವಕಾಶ ನೀಡದ ಕೋರಿರುವ ಮಾಹಿತಿಯನ್ನು ಕೂಡಲೇ ಆಯುಕ್ತಾಲಯಕ್ಕೆ ಸಲ್ಲಿಸುವಂತೆ ಮತ್ತೊಮ್ಮೆ ಕೋರಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು (ಅಭಿವೃದ್ಧಿ)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಬೆಂಗಳೂರು.

**ಪ್ರತಿಯನ್ನು:**

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಸಹಾಯಕರು, ಬೆಂಗಳೂರು
2. ಶಾಖಾ ರಕ್ಷಾ ಕಡತಕ್ಕೆ /ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ
ಪಂಚಾಯತ್ ರಾಜ್ ಆಯುಕ್ತಾಲಯ
ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.

ಸಂಖ್ಯೆ: ಕಪಂರಾಆ/ಅಭಿವೃದ್ಧಿ/183/2024

ದಿನಾಂಕ:19.03.2024.

**ಇವರಿಗೆ,**
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೇ,

**ವಿಷಯ:** ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಸಂಪನ್ಮೂಲ ಖಾತೆಯಿಂದ ಶೇ.25 ರ (ಎಸ್.ಸಿ/ಎಸ್.ಟಿ ಖಾತೆಯ) ಹಣ ದುರ್ಬಳಕೆ ಮಾಡಿರುವ ಬಗ್ಗೆ.

**ಉಲ್ಲೇಖ:** ಶ್ರೀ ಎ.ಎಂ.ಚಲಪತಿ, ಅಖಿಲ ಭಾರತೀಯ ಪಂಚಾಯತ್ ಪರಿಷದ್ ಶೇಷಾದ್ರಿಪುರಂ, ಬೆಂಗಳೂರು ಇವರ ಪತ್ರ ದಿನಾಂಕ:13.02.2024

****

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ 2020-21, 2021-22, 2022-23 ಮತ್ತು 2023-24 ನೇ ಸಾಲುಗಳಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಸಂಪನ್ಮೂಲ ನಿಧಿಯಲ್ಲಿ ಶೇ.25 ರಷ್ಟು ಮೊತ್ತವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಲ್ಯಾಣ ಕಾರ್ಯಕ್ರಮಕ್ಕೆ ಬಳಸಲು ಸ್ಪಷ್ಟ ನಿರ್ದೇಶನ ನೀಡಿದ್ದರೂ ಸಹ ಯಾವುದೇ ಗ್ರಾಮ ಪಂಚಾಯಿತಿಗಳು ಸ್ವಂತ ಸಂಪನ್ಮೂಲ ನಿಧಿಯಿಂದ ಶೇ.25ರ ಖಾತೆಗೆ ಹಣವನ್ನು ಜಮ ಮಾಡದೆ ದುರ್ಬಳಕೆ ಮಾಡಿಕೊಂಡಿರುವ ಬಗ್ಗೆ, ಹಾಗೂ ಎಲ್ಲಾ ಗ್ರಾಮ ಪಂಚಾಯಿತಿಗಳ ಸ್ವಂತ ನಿಧಿಯ ಪ್ರತಿ ವರ್ಷ ಸಂಗ್ರಹವಾದ ಮೊತ್ತ ಮತ್ತು ಶೇ.25 ರ ಖಾತೆಗೆ ಜಮ ಮಾಡಿರುವ ಬಗ್ಗೆ, ಸಂಪೂರ್ಣ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಿ, ಲೋಪದೋಷವನ್ನು ಸರಿಪಡಿಸಬೇಕೆಂದು ಕೋರಿರುತ್ತಾರೆ.

ಮುಂದುವರೆದು, ಸದರಿ ವಿಷಯದ ಕುರಿತು ಕೆಳಕಾಣಿಸಿದ ಅನುಬಂಧದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಗ್ರಾಮ ಪಂಚಾಯತಿಗಳು ಸ್ವಂತ ಸಂಪನ್ಮೂಲ ನಿಧಿಯಿಂದ ಶೇ25ರ ಪ.ಜಾತಿ/ಪ.ಪಂಗಡ ಕಲ್ಯಾಣ ಕಾರ್ಯಕ್ರಮಗಳಿಗೆ ಮೀಸಲಿರಿಸಿದ ಹಾಗೂ ವೆಚ್ಚ ಮಾಡಿದ ಅನುದಾನವನ್ನು ಭರ್ತಿ ಮಾಡಿ ಆಯುಕ್ತಾಲಯಕ್ಕೆ ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ,

1217

(signature)

ನಿರ್ದೇಶಕರು (ಅಭಿವೃದ್ಧಿ)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

2/3

**ಪ್ರತಿಯನ್ನು:**

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಸಹಾಯಕರು, ಬೆಂಗಳೂರು.

NIC
20/03/24
17796
Admin

2. ಶ್ರೀ ಎ.ಎಂ.ಚೆಲಪತಿ, ನ್ಯಾಷನಲ್ ಸೆಕ್ರೇಟರಿ ಅಖಿಲ ಭಾರತೀಯ ಪಂಚಾಯತ್ ಪರಿಷದ್ , ನಂ.5, 2ನೇ ಅಡ್ಡರಸ್ತೆ, ಎನ್.ಎಸ್.ಐಯ್ಯಂಗಾರ್ ರೋಡ್, ಶೇಷಾದ್ರಿಪುರಂ, ಬೆಂಗಳೂರು-560020.

3. ಶಾಖಾ ರಕ್ಷಾ ಕಡತಕ್ಕೆ /ಹೆಚ್ಚುವರಿ ಪ್ರತಿ.

## ಅನುಬಂಧ

ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಸಂಪನ್ಮೂಲ ನಿಧಿಯ ಶೇ.25 ರಷ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕಲ್ಯಾಣ ಕಾರ್ಯಕ್ರಮಕ್ಕಾಗಿ ಮೀಸಲಿರಿಸಿರುವ ಅನುದಾನದ ಕುರಿತು.

| ಕ್ರ. ಸಂ | ಜಿಲ್ಲೆ | ತಾಲ್ಲೂಕು | ಗ್ರಾಮ ಪಂಚಾಯಿತಿ | ಸ್ವಂತ ಸಂಪನ್ಮೂಲದಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಮೀಸಲಿರಿಸಿದ ಅನುದಾನ | | | | ಸ್ವಂತ ಸಂಪನ್ಮೂಲದಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ದವರಿಗೆ ವೆಚ್ಚ ಮಾಡಿದ ಅನುದಾನ | | | | ಷರಾ |
|---|---|---|---|---|---|---|---|---|---|---|---|---|
| | | | | 2020-21 | 2021-22 | 2022-23 | 2023-24 | 2020-21 | 2021-22 | 2022-23 | 2023-24 | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯಿತಿ

ಉಪ ಕಾರ್ಯದರ್ಶಿ
ಜಿಲ್ಲಾ ಪಂಚಾಯಿತಿ